ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST ಇದು ಸುದ್ದಿ ವಿಲಾಸ

ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 155 | Pages. 2 | Date: 27-05-2026, WEDNESDAY | RNI NO: KARKAN/2024/89601 | Kannada Daily

ಸಂಪುಟ : 02 - ಸಂಚಿಕೆ : 155 - ಪುಟಗಳು : 2 | 27-05-2026 ಬುಧವಾರ | Ph: 8762954248 | ದರ : ₹1

ಕೈ ಸರ್ಕಾರ ಕೋಮಾದಲ್ಲಿದೆ

ಅಧಿಕಾರ ಕಿತ್ತಾಟಕ್ಕೆ ಟೀಕೆ: ಬೆಲೆ ಏರಿಕೆ ಆರೋಪಕ್ಕೆ ಅಶೋಕ್ ತಿರುಗೇಟು

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ರಾಜ್ಯದಲ್ಲಿ ಅಧಿಕಾರ ಹಂಚಿಕೆ ಕಿತ್ತಾಟದಲ್ಲಿ ಸರ್ಕಾರ ಕೋಮಾದಲ್ಲಿದೆ ಎಂದು ವಿಪಕ್ಷ ನಾಯಕ ಆರ್.ಅಶೋಕ್ ಟೀಕಿಸಿದರು.

ಇಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಯಾರು ಮುಖ್ಯಮಂತ್ರಿ ಆಗುತ್ತಾರೆ, ಯಾರು ಹೋಗುತ್ತಾರೆ ಎಂಬ ಗೊಂದಲವೇ ಆಡಳಿತವನ್ನು ಹಾಳು ಮಾಡಿದೆ. ಅವ್ಯವಸ್ಥೆ ಸರಿಪಡಿಸಲು ಕಾಂಗ್ರೆಸ್ ಹೈಕಮಾಂಡ್ ದುರ್ಬಲವಾಗಿದೆ. ಅಧಿಕಾರಿಗಳದ್ದೇ ಆಟ ನಡೆಯುತ್ತಿದೆ ಎಂದು ವಾಗ್ದಾಳಿ ನಡೆಸಿದರು.

ಇದೇ ವೇಳೆ ಮುಂದಿನ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಸರ್ಕಾರವನ್ನು ಜನ ತಿರಸ್ಕರಿಸಲಿದ್ದು, 2028ರಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರ ಅಧಿಕಾರಕ್ಕೆ ಬರಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ರಾಜ್ಯ ಸರ್ಕಾರದ ಆರ್ಥಿಕ ಸ್ಥಿತಿ ದಿನದಿಂದ ದಿನಕ್ಕೆ ಹದಗೆಡುತ್ತಿದ್ದು, ಗ್ಯಾರಂಟಿ ಯೋಜನೆಗಳ ಪರಿಣಾಮವಾಗಿ ರಾಜ್ಯದ ಸಾಲದ ಮೊತ್ತ 7 ಲಕ್ಷ ಕೋಟಿ ದಾಟಿದೆ ಎಂದು ಆರೋಪಿಸಿದ ಅಶೋಕ್, ಮುಂದಿನ ವರ್ಷಕ್ಕೆ ಸಾಲದ ಪ್ರಮಾಣ 8.5 ಲಕ್ಷ ಕೋಟಿಗೆ ಏರಲಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರ ಬಿಡುವ ವೇಳೆಗೆ ಅದು 10 ಲಕ್ಷ ಕೋಟಿಗೆ ತಲುಪಲಿದೆ ಎಂದು ಆತಂಕ ಹೊರ ಹಾಕಿದರು.

ಇದುವರೆಗೆ ರಾಜ್ಯದ ಎಲ್ಲಾ ಸಿಎಂಗಳು ಮಾಡಿದ ಸಾಲಕ್ಕಿಂತ ಹೆಚ್ಚು ಸಾಲವನ್ನು ಸಿದ್ದರಾಮಯ್ಯ ಮಾಡಿದ್ದಾರೆ ಎಂದು ಟೀಕಿಸಿದರು.

ಗ್ಯಾರಂಟಿ ಯೋಜನೆ ಕುರಿತು ಪ್ರತಿಕ್ರಿಯಿಸಿದ ಅವರು, ನಾವು ಗ್ಯಾರಂಟಿ ವಿರೋಧಿಗಳಲ್ಲ. ಯಡಿಯೂರಪ್ಪ

ಮುಖ್ಯಮಂತ್ರಿಯಾಗಿದ್ದಾಗ ಭಾಗ್ಯಲಕ್ಷ್ಮಿ, ಸೈಕಲ್ ವಿತರಣೆ ಯೋಜನೆ ಜಾರಿಗೆ ತಂದಿದ್ದೆವು. ನಾವು ಆದಾಯಕ್ಕೆ ಅನುಗುಣವಾಗಿ ಯೋಜನೆ ರೂಪಿಸಿದ್ದೆವು. ಆದರೆ ಕಾಂಗ್ರೆಸ್ ಚುನಾವಣೆ ಗೆಲ್ಲಲು ಗ್ಯಾರಂಟಿ ಘೋಷಿಸಿ ಈಗ ಅದಕ್ಕೆ ಕತ್ತರಿ ಹಾಕಲು ಹೊರಟಿದೆ ಎಂದು ಲೇವಡಿ ಮಾಡಿದರು.

ಬಿಪಿಎಲ್ ಕಾರ್ಡ್‌ಗಳನ್ನು ಎಪಿಎಲ್‌ಗೆ ಪರಿವರ್ತಿಸುವ ಮೂಲಕ ಬಡವರ ಅನ್ನಕ್ಕೆ ಕನ್ನ ಹಾಕಲಾಗುತ್ತಿದೆ ಎಂದು ದೂರಿದ ಅವರು, ಸರ್ಕಾರದ ಬಳಿ ಹಣವಿಲ್ಲದ ಕಾರಣ ಬಿಪಿಎಲ್ ಕಾರ್ಡ್ ರದ್ದು ಮಾಡುವ ಹುನ್ನಾರ ನಡೆಯುತ್ತಿದೆ. ಮೃತರ ಹೆಸರನ್ನು ತೆಗೆದುಹಾಕುವುದು ಸಹಜ ಪ್ರಕ್ರಿಯೆ. ಆದರೆ ಈಗ ಉದ್ದೇಶಪೂರ್ವಕವಾಗಿ ಬಡವರ ಕಾರ್ಡ್‌ಗಳನ್ನು ರದ್ದು ಮಾಡಲಾಗುತ್ತಿದೆ ಎಂದು ದೂರಿದರು.

ರಾಜ್ಯದಲ್ಲಿ ಪಡಿತರ ಅಕ್ಕಿ ವಿತರಣೆಯಲ್ಲಿಯೂ ಅವ್ಯವಸ್ಥೆ ಉಂಟಾಗಿದೆ.

ಕೇಂದ್ರ ಸರ್ಕಾರದಿಂದ ಒಂದು ತಿಂಗಳಿಗೂ ಅಕ್ಕಿ ಬಾಕಿ ಇಲ್ಲ. ಆದರೂ ಅನೇಕ ಪಡಿತರ ಅಂಗಡಿಗಳಲ್ಲಿ ಅಕ್ಕಿ ಸಿಗುತ್ತಿಲ್ಲ. ಮೂರು ತಿಂಗಳಿಂದ ಪಿಂಚಣಿ ಸಹ ಸರಿಯಾಗಿ ವಿತರಣೆ ಆಗುತ್ತಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಹಾಸನ ಜಿಲ್ಲೆಯಲ್ಲಿ ಶೇ.30 ರಷ್ಟು ಮಳೆ ಕೊರತೆ ಉಂಟಾಗಿದೆ. ಬಿತ್ತನೆ ಪ್ರಮಾಣ ಕುಸಿದಿದೆ. ಇದನ್ನು ಎದುರಿಸಲು ಸರ್ಕಾರ ಯಾವುದೇ ಸಿದ್ಧತೆ ಮಾಡಿಕೊಂಡಿಲ್ಲ. ಮಂತ್ರಿಗಳು ಜಿಲ್ಲಾ ಪ್ರವಾಸ ಮಾಡದೆ, ದೆಹಲಿ ಪ್ರವಾಸ ಮಾಡುತ್ತಿದ್ದಾರೆ ಎಂದು ವ್ಯಂಗ್ಯವಾಡಿದರು.

ಕಾಂಗ್ರೆಸ್‌ಗೆ ಟಕ್ಕರ್

ರಾಜ್ಯದಲ್ಲಿ ಲೂಟಿ ಮಾಡುತ್ತಿರುವುದು ಕಾಂಗ್ರೆಸ್ ಸರ್ಕಾರವೇ. ದೆಹಲಿಯಲ್ಲಿ ಲೀಟರ್ ಪೆಟ್ರೋಲ್ 99 ರೂ.ಇದ್ದರೆ, ಕರ್ನಾಟಕದಲ್ಲಿ 110 ಇದೆ. ಹೆಚ್ಚುವರಿ ತೆರಿಗೆಯಿಂದ ರಾಜ್ಯ ಸರ್ಕಾರಕ್ಕೆ ಸಾವಿರಾರು ಕೋಟಿ ಆದಾಯ ಬರುತ್ತಿದೆ. ಸಿದ್ದರಾಮಯ್ಯ ಅವರಿಗೆ ದಮ್ಮು, ತಾಕತ್ತು ಇದ್ದರೆ ಈ ಹಣ ಎಲ್ಲಿಗೆ ಹೋಗುತ್ತಿದೆ ಎಂದು ಉತ್ತರಿಸಲಿ, ಜನರ ಮೇಲೆ ಹೊರೆ ಹಾಕಿ ಕೇಂದ್ರವನ್ನು ದೂರುವುದು ಸರಿಯಲ್ಲ ಎಂದು ಅಶೋಕ್ ತಿರುಗೇಟು ನೀಡಿದರು.

ಮಹಾತ್ಮ ಗಾಂದಿ ಆದರ್ಶದ ಬಗ್ಗೆ ಮಾತನಾಡುವ ಕಾಂಗ್ರೆಸ್, ಅಬಕಾರಿ ಆದಾಯವನ್ನು 25 ಸಾವಿರ ಕೋಟಿಯಿಂದ 45 ಸಾವಿರ ಕೋಟಿಗೆ ಹೆಚ್ಚಿಸಿದೆ. ಕಿಕ್ ಮೇಲೆ ಟ್ಯಾಕ್ಸ್ ವ್ಯವಸ್ಥೆ ಮೂಲಕ ಸರ್ಕಾರ ಬದುಕುತ್ತಿದೆ ಎಂದು ಲೇವಡಿ ಮಾಡಿದರು.

ಆಳಂದದಲ್ಲಿ ಪೊಲೀಸರ ಮೇಲೆ ದಾಳಿ ನಡೆಸಿದವರ ಮೇಲಿನ ಪ್ರಕರಣ ಹಿಂಪಡೆದಿರುವುದನ್ನು ಖಂಡಿಸಿ ಹಾಗೂ ಭಟ್ಕಳ ಹಲ್ಲೆ ಪ್ರಕರಣದ ಬಗ್ಗೆ ಪಕ್ಷದ ರಾಜ್ಯಾಧ್ಯಕ್ಷರೊಂದಿಗೆ ಚರ್ಚಿಸಿ ಮೇ 29ರಂದು ಭಟ್ಕಳ್ ಚಲೋ' ಹಮ್ಮಿಕೊಳ್ಳಲಾಗುತ್ತಿದೆ ಎಂದು ಅಶೋಕ್ ಹೇಳಿದರು. ಸುದ್ದಿಗೋಷ್ಠಿಯಲ್ಲಿ ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಹಾಗೂ ಮಾಜಿ ಶಾಸಕ ಪ್ರೀತಂ ಜೆ.ಗೌಡ ಹಾಗೂ ಶಾಸಕ ಸಿಮೆಂಟ್ ಮಂಜು, ಎಂಎಲ್‌ಸಿ ರವಿಕುಮಾರ್, ಬಿಜೆಪಿ ಜಿಲ್ಲಾಧ್ಯಕ್ಷ ಸಿದ್ದೇಶ್ ನಾಗೇಂದ್ರ ಮೊದಲಾದವರಿದ್ದರು.

ತಮ್ಮನಿಂದಲೇ ಜಮೀನು ದೋಖಾ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ತಾಲೂಕಿನ ಶಾಂತಿಗ್ರಾಮ ಹೋಬಳಿ ಕೊಂತಗೌಡನಹಳ್ಳಿಯ ಸ್ವಾಮಿಗೌಡ ಎಂಬುವರಿಗೆ, ಅವರ ಸಹೋದರ ರಂಗಸ್ವಾಮಿ ಮತ್ತು ಮಕ್ಕಳು ಆಸ್ತಿ ವಿಚಾರದಲ್ಲಿ ಮೋಸ ಮಾಡಿದ್ದಾರೆ ಎಂದು ದಲಿತ ಸಂಘಟನೆ ಸಮಿತಿ ಜಿಲ್ಲಾಧ್ಯಕ್ಷ ಚೇತನ್ ಆರೋಪಿಸಿದರು.

ಇಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸ್ವಾಮಿಗೌಡ ಅವರ ತಂದೆ ರಂಗೇಗೌಡ ಅವರ ಪಿತ್ರಾರ್ಜಿತ ಆಸ್ತಿ ಸಹೋದರರ ನಡುವೆ ಸಮನಾಗಿ ಹಂಚಿಕೆ ಆಗಬೇಕಿತ್ತು. ಈ ನಡುವೆ ಹೆಣ್ಣು ಮಕ್ಕಳೂ ಆಸ್ತಿ ಬೇಕು ಎಂದು ಕೇಳಿದ್ದರಿಂದ ಅವರಿಗೂ ಇಂತಿಷ್ಟು ಎಂದು ಹಂಚಿಕೆ ಮಾಡಲಾಗಿತ್ತು.

ಈ ನಡುವೆ ರಂಗಸ್ವಾಮಿ ನಾವಿಬ್ಬರೂ ತಂದೆ ಆಸ್ತಿಯನ್ನು ಸಮನಾಗಿ ಹಂಚಿಕೊಳ್ಳೋಣ ಎಂದು ನಂಬಿಸಿ, ಭೂಮಿಯ ಸರ್ವೆ ನಂಬರ್ ತೋರಿಸದೆ ಅಣ್ಣ ಸ್ವಾಮಿಗೌಡ ಮತ್ತು ಹೆಣ್ಣು ಮಕ್ಕಳ ಕಡೆಯಿಂದ ಹಕ್ಕು ಖುಲಾಸೆ ಪತ್ರ ಮಾಡಿಸಿದ್ದಾರೆ ಎಂದು ದೂರಿದರು.

ಸ.ನಂ. 70/1 ರಲ್ಲಿ 1.30 ಎಕರೆ, 7/14 ರಲ್ಲಿ 14 ಗುಂಟೆ ನ್ಯಾಯಾಲಯದಲ್ಲಿ ಡಿಗ್ರಿಯಾಗಿದೆ. ಉಳಿಕೆ ಭೂಮಿ 31/3 ಇದರಲ್ಲಿ 8.8 ಗುಂಟೆ 7.5 ಈ ಸರ್ವೆನಂಬರ್‌ನ 1 ಎಕರೆ 8 ಗುಂಟೆಯನ್ನು ತಲಾ ಇಬ್ಬರಿಗೂ ಸಮನಾಗಿ ಹಂಚಿಕೆ ಮಾಡಬೇಕಿತ್ತು. ಆದರೆ ಮುಚ್ಚು ಮರೆಯಿಂದ ಸ್ವಾಮಿಗೌಡ ಮತ್ತವರ ಇಬ್ಬರು ಹೆಣ್ಣು ಮಕ್ಕಳ ಸಹಿಯನ್ನು ಪಡೆದು ಎಲ್ಲವನ್ನೂ ತಮ್ಮಂತೆ ಮಾಡಿಕೊಂಡಿದ್ದಾರೆ ಎಂದು ಆರೋಪಿಸಿದರು.

ಇದರಿಂದ ಕಂದಾಯ ಇಲಾಖೆಯ ವಿಎ, ಆರ್‌ಐ ಮೊದಲಾದವರು ಭಾಗಿಯಾಗಿದ್ದಾರೆ. ಯಾವುದೇ ದಾಖಲಾತಿ ಪರಿಶೀಲಿಸದೆ ಒಬ್ಬರ ಹೆಸರಿಗೆ ಖಾತೆ ಮಾಡಿಕೊಟ್ಟಿದ್ದಾರೆ. ರಂಗಸ್ವಾಮಿ ಬೇರೊಬ್ಬರೊಂದಿಗೆ ಜೀವಿ ಮಾಡಿಕೊಂಡಿದ್ದಾರೆ. ಒಟ್ಟಾರೆ ಎಲ್ಲರೂ ಸೇರಿ ಬಡ ಕುಟುಂಬಕ್ಕೆ ಮೋಸದಿಂದ ಸುಮಾರು 2 ಎಕರೆ ಜಾಗ ಮೋಸ ಮಾಡಿದ್ದು, ಎಲ್ಲರ ಮೇಲೆ ಕ್ರಮ ಆಗಬೇಕು. ಈ ಬಗ್ಗೆ ತನಿಖೆ ಆಗಬೇಕು ಎಂದು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಮೋಸ ಹೋಗಿರುವ ಸ್ವಾಮಿಗೌಡ, ಮಗಳು ಪೂರ್ಣಿಮಾ, ದಲಿತ ಮುಖಂಡರಾದ ಚಿಕ್ಕಯ್ಯ, ದಿನೇಶ್, ಗ್ರಾಮಸ್ಥ ಸಂತೋಷ್ ಇದ್ದರು.

ಗೋ ಹತ್ಯೆ ನಿಷೇಧ ಕಾಯ್ದೆ ವಾಪಸ್‌ಗೆ ಆಗ್ರಹ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ರೈತ ವಿರೋಧಿ ಜಾನುವಾರು ವಧೆ ಹಾಗೂ ಮಾರಾಟ ನಿಷೇಧ ಕಾಯ್ದೆ 2020 ವಾಪಸ್ ಪಡೆದು, ರೈತರ ಜಾನುವಾರುಗಳ ಮಾರಾಟಕ್ಕೆ ಸೂಕ್ತ ವ್ಯವಸ್ಥೆ ಕಲ್ಪಿಸಬೇಕು ಎಂದು ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ, ಕರ್ನಾಟಕ ಪ್ರಾಂತ ರೈತ ಸಂಘ ಮತ್ತು ಜಿಲ್ಲಾ ದಲಿತ ಮತ್ತು ಜನಪರ ಚಳುವಳಿಗಳ ಒಕ್ಕೂಟದವರು ಇಂದು ಪ್ರತಿಭಟನೆ ನಡೆಸಿದರು.

ಕೃಷಿಕ್ಷೇತ್ರ ಸಂಕಷ್ಟದಲ್ಲಿರುವಾಗ, ಕೃಷಿ ಆದಾಯವನ್ನೇ ನಂಬಿ ಬದುಕು ನಡೆಸಲಾಗದ ರೈತ ಸಮುದಾಯ, ಹೈನುಗಾರಿಕೆಯಂತಹ ಚಟುವಟಿಕೆಗಳಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡು ಬದುಕನ್ನು ಕಂಡುಕೊಳ್ಳಲು ಹರಸಾಹಸ ಪಡುತ್ತಿದ್ದಾರೆ.

ಹಾಲಿನ ಉತ್ಪಾದನೆಯ

ಉದ್ದೇಶಕ್ಕಾಗಿ ಸಾಕುವ ಜರ್ಸಿ ಹಸುಗಳು ವಯಸ್ಸಾದ ಮೇಲೆ ಮತ್ತು ಈ ಹಸುಗಳು ಹೆಣ್ಣು ಕರುವಿನ ಬದಲು ಗಂಡು ಕರುವಿಗೆ ಜನ್ಮನೀಡಿದರೆ, ಅದನ್ನು ಸಾಕುವುದು ರೈತ ಸಮುದಾಯಕ್ಕೆ ದೊಡ್ಡ ಹೊರೆಯಾಗುತ್ತದೆ. ಈ ಎಲ್ಲಾ ಉದ್ದೇಶದಿಂದ ಅನುಪಯುಕ್ತ ರಾಸುಗಳನ್ನು ಮಾರಾಟ ಮಾಡುವ ಮೂಲಕ ಅಲ್ಪಸ್ವಲ್ಪ ಆದಾಯ ಪಡೆಯುತ್ತಿದ್ದಾರೆ.

ಆದರೆ ಕರ್ನಾಟಕದಲ್ಲಿ ಜಾರಿಯಲ್ಲಿರುವ ಜಾನುವಾರು ವಧೆ ಹಾಗೂ ಮಾರಾಟ ನಿಷೇಧ ಕಾಯ್ದೆ ರೈತ ವಿರೋಧಿಯಾಗಿದ್ದು, ಇದರಿಂದ ರೈತರು ತಮ್ಮ ರಾಸುಗಳನ್ನು ಮುಕ್ತವಾಗಿ ಮಾರಾಟ ಮಾಡಲು ಸಾಧ್ಯವಾಗದಂತಹ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಪ್ರತಿಭಟನಾಕಾರರು ದೂರಿದರು.

ಮತ್ತೊಂದೆಡೆ ಈ ಕಾಯ್ದೆಯನ್ನು ದುರುಪಯೋಗಪಡಿಸಿಕೊಂಡು ಕೆಲ ಹಿಂದುತ್ವವಾದಿ ಶಕ್ತಿಗಳು ಮತ್ತು ಭಜರಂಗದಳದಂತಹ ಸಂಘಟನೆಗಳು ಅಲ್ಪಸಂಖ್ಯಾತರ ಮೇಲೆ ದಾಳಿ ನಡೆಸುವ ಮತ್ತು ನೈತಿಕ ಪೊಲೀಸ್‌ಗಿರಿ ತೋರುವ ಕೆಲಸಕ್ಕೂ ಮುಂದಾಗಿದ್ದಾರೆ. ಭಾರತದ ಸಂವಿಧಾನದಲ್ಲಿ ಭಾರತದ ಪ್ರತಿಯೊಬ್ಬ ಪ್ರಜೆಗೂ ತನಗೆ ಬೇಕಾದ ಧರ್ಮ ಅನುಸರಿಸುವ ಮತ್ತು ತನಗೆ ಬೇಕಾದ ಆಹಾರ ತಿನ್ನುವ ಮುಕ್ತ ಸ್ವಾತಂತ್ರ್ಯ ನೀಡಲಾಗಿದೆ ಎಂದರು.

ಜಿಲ್ಲೆಯಲ್ಲಿ ಬಕ್ರೀದ್ ಹಬ್ಬದ ಹಿನ್ನೆಲೆ ಕುರ್ಬಾನಿಗೆ ಗೋವುಗಳನ್ನು ಬಳಸಬಾರದೆಂಬ ಜಿಲ್ಲಾಡಳಿತದ ಸೂಚನೆ ಒಂದು ಕಡೆ ಅಲ್ಪಸಂಖ್ಯಾತರು ಮತ್ತು ದನದ ಮಾಂಸ ಉಪಯೋಗಿಸುವ ಎಲ್ಲರ ಆಹಾರದ ಹಕ್ಕಿನ ಮೇಲಿನ ದಾಳಿಯಾಗಿದೆ ಮತ್ತು ಇದು ನೇರವಾಗಿ ರೈತ ಸಮುದಾಯದ ಮೇಲೆ ಪರಿಣಾಮ ಬೀರುತ್ತದೆ.

ಆದ್ದರಿಂದ ಜಿಲ್ಲಾಡಳಿತ ಈ ನಿಲುವುಗಳನ್ನು ಸಡಿಲಗೊಳಿಸಿ, ರೈತರು ತಮ್ಮ ರಾಸುಗಳನ್ನು ಮುಕ್ತವಾಗಿ ಮಾರಾಟ ಮಾಡುವ ವ್ಯವಸ್ಥೆ ಕಲ್ಪಿಸಿ ಕೊಡಬೇಕು ಎಂದರು.

ವಿಯೆಟ್ನಾಂನಲ್ಲಿ ಅಂತಾರಾಷ್ಟ್ರೀಯ ವಿಜ್ಞಾನ ಸಮ್ಮೇಳನ

ಹಾಸನದ ಶ್ರೀಮತಿ ರಾಣಿ ವಿ.ಎಸ್. ಅವರಿಗೆ ಪ್ರತಿಷ್ಠಿತ 'ಜೀವಮಾನ ಸಾಧನಾ ಫೆಲೋಶಿಪ್ ಪ್ರಶಸ್ತಿ'

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಸಾಂಸ್ಕೃತಿಕ, ಧಾರ್ಮಿಕ, ವೈಜ್ಞಾನಿಕ, ಆರೋಗ್ಯ ಹಾಗೂ ಸಮಾಜ ಸೇವೆಯಲ್ಲಿ ತಮ್ಮದೇ ಆದ ವಿಶಿಷ್ಟ ಛಾಪು ಮೂಡಿಸಿರುವ ಹಾಸನದ ಶ್ರೀಮತಿ ರಾಣಿ ವಿ.ಎಸ್. ಅವರಿಗೆ ವಿಯೆಟ್ನಾಂನಲ್ಲಿ ನಡೆದ ಇಂಡೋ-ವಿಯೆಟ್ನಾಂ ಸೈಂಟಿಫಿಕ್ ಸಮ್ಮಿಟ್-2026 ರಲ್ಲಿ ಪ್ರತಿಷ್ಠಿತ "ಜೀವಮಾನ ಸಾಧನಾ ಫೆಲೋಶಿಪ್ ಪ್ರಶಸ್ತಿ" ನೀಡಿ ಗೌರವಿಸಲಾಗಿದೆ.

ಅಂತರರಾಷ್ಟ್ರೀಯ ಮಟ್ಟದಲ್ಲಿ ಒಲಿದು ಬಂದಿರುವ ಈ ಗೌರವವು ಹಾಸನ ಜಿಲ್ಲೆಯ ಕೀರ್ತಿಯನ್ನು ಮತ್ತಷ್ಟು ಹೆಚ್ಚಿಸಿದೆ.

ದಿನಾಂಕ 22 ಮೇ 2026 ರಂದು ವಿಯೆಟ್ನಾಂನ ಡೊನಾಂಗ್‌ನಲ್ಲಿ ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತಿನ ಸಂಸ್ಥಾಪಕ ಅಧ್ಯಕ್ಷರಾದ ಡಾ. ಹುಲಿಕಲ್ ನಟರಾಜು ಅವರ ಅಧ್ಯಕ್ಷತೆಯಲ್ಲಿ ನಡೆದ ಅಂತರರಾಷ್ಟ್ರೀಯ ವಿಜ್ಞಾನ ಸಮ್ಮೇಳನದಲ್ಲಿ ಈ ಪ್ರಶಸ್ತಿಯನ್ನು ಪ್ರದಾನ ಮಾಡಲಾಯಿತು.

ವೇದಿಕೆಯಲ್ಲಿ ವಿಯೆಟ್ನಾಂ ದೇಶದ ರಾಯಭಾರಿ ಹಾಗೂ ಐಪಿಎಸ್ ಅಧಿಕಾರಿ ಶ್ರೀ ಪ್ರದೀಪ್, ಯಾದಗಿರಿಯ ಶಾಂತವೀರ ಗುರು ಮುರುಘರಾಜೇಂದ್ರ ಸ್ವಾಮೀಜಿ, ಬೀದರ್‌ನ ಬಸವ ಸ್ವಾಮೀಜಿ, ಗುರುಬಸವ ಮಠದ ಶಿವಾನಂದ ಸ್ವಾಮೀಜಿ, ಸಮಾಜ ಸೇವಕರಾದ ದಿನೇಶ್ ಕುಮಾರ್ ಜೈನ್, ಅಜಿತ್ ಅಹಮದ್ ಸೇನಾ, ಕವಿ ವಿಶ್ವರಾಧ್ಯ ಸತ್ಯಂಪೇಟೆ ಹಾಗೂ ಶಿಕ್ಷಣ ಪ್ರೇಮಿ ಗುಂಡಪ್ಪ ಕಲ್ಬುರ್ಗಿ ಉಪಸ್ಥಿತರಿದ್ದರು.

ಭಾರತ ಸೇವಾದಳದ ವಲಯ ಸಂಘಟಕರು, ನವಚೇತನ ಚಾರಿಟೇಬಲ್ ಟ್ರಸ್ಟ್‌ನ ಅಧ್ಯಕ್ಷರು ಹಾಗೂ ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತಿನ ನಿರ್ದೇಶಕಿಯಾಗಿರುವ ಶ್ರೀಮತಿ ರಾಣಿಯವರು ಕಳೆದ ಎರಡು ದಶಕಗಳಿಂದ ಸಮಾಜದ ವಿವಿಧ ಸ್ತರಗಳಲ್ಲಿ ಗಣನೀಯ ಸೇವೆ ಸಲ್ಲಿಸುತ್ತಿದ್ದಾರೆ.

ಹೆತ್ತೂರು ಕಾಫಿ ಬ್ರಾಂಡ್‌ಗೆ ರಾಜ್ಯಮಟ್ಟದ ಗುರುತು ಸಿಗಲಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ : ''ಈ ಭಾಗದ ರೈತರ ಬದುಕು ಹಸನಾಗಬೇಕು ಎಂಬುದು ನನ್ನ ಆಶಯ. ನಮ್ಮದೇ ಆದ ಗುಣಮಟ್ಟದ ಕಾಫಿ ಬ್ರಾಂಡ್ ನಿರ್ಮಿಸಿ ರೈತರ ಆದಾಯ ಹೆಚ್ಚಿಸುವ ಕೆಲಸವಾಗಬೇಕು. 'ಹೆತ್ತೂರು' ಹೆಸರಿನ ಕಾಫಿ ಬ್ರಾಂಡ್ ರಾಜ್ಯ ಹಾಗೂ ದೇಶ ಮಟ್ಟದಲ್ಲಿ ಗುರುತಿಸಿಕೊಳ್ಳುವಂತಾಗಲಿ'' ಎಂದು ಕರ್ನಾಟಕ ಹೈಕೋರ್ಟ್ ನ್ಯಾಯಮೂರ್ತಿ ಹೆಚ್.ಸಿ. ಸಂದೇಶ್ ಆಶಯ ವ್ಯಕ್ತಪಡಿಸಿದರು.

ತಾಲೂಕಿನ ಹೆತ್ತೂರು ಹೋಬಳಿಯ ಖಾಸಗಿ ರೆಸಾರ್ಟ್‌ನಲ್ಲಿ ಮಂಗಳವಾರ ಆಯೋಜಿಸಿದ್ದ ಹೆತ್ತೂರು ವೆಸ್ಟನ್ ಘಾಟ್ ಫಾರ್ಮರ್ಸ್ ಪ್ರೊಡ್ಯೂಸರ್ ಕಂಪನಿ ಲಿಮಿಟೆಡ್ ಉದ್ಘಾಟನಾ ಕಾರ್ಯಕ್ರಮದಲ್ಲಿ ಸಂಸ್ಥೆಗೆ ಚಾಲನೆ ನೀಡಿ ಅವರು ಮಾತನಾಡಿದರು.

''ಇಂದು ನಮ್ಮೆಲ್ಲರ ಕನಸಿನ ಕಂಪನಿಗೆ ಚಾಲನೆ ನೀಡಿದ್ದೇವೆ. ಮಗು ಹುಟ್ಟಿದ ಬಳಿಕ ಅದರ ಬೆಳವಣಿಗೆಯನ್ನು ಹೇಗೆ ಕಾಳಜಿಯಿಂದ ನೋಡಿಕೊಳ್ಳುತ್ತೇವೋ, ಅದೇ ರೀತಿ ಸಂಸ್ಥೆಯ ಬೆಳವಣಿಗೆಯ ಮೇಲೂ ಎಲ್ಲರೂ ಜವಾಬ್ದಾರಿಯುತ ಮನೋಭಾವ ಹೊಂದಬೇಕು. ಶ್ರಮ, ನಂಬಿಕೆ, ಸಾಮರಸ್ಯ ಮತ್ತು ಪಾರದರ್ಶಕತೆಯೇ ಯಾವುದೇ ಸಂಸ್ಥೆಯ ಯಶಸ್ಸಿನ ಮೂಲ ಆಧಾರ'' ಎಂದು ಹೇಳಿದರು.

ಕಂಪನಿ ಸ್ಥಾಪನೆಯಾದ ಬಳಿಕ ಷೇರುದಾರರೊಂದಿಗೆ ಉತ್ತಮ ಬಾಂಧವ್ಯ ಮತ್ತು ಸಮನ್ವಯತೆ ಕಾಪಾಡಿಕೊಳ್ಳಬೇಕು. ಹಣಕಾಸು ವ್ಯವಹಾರಗಳಲ್ಲಿ ಸಂಪೂರ್ಣ ಪಾರದರ್ಶಕತೆ ಇರಬೇಕು. ನಿರ್ದೇಶಕರು ಎಲ್ಲರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಸಾಗಬೇಕು. ಹಣ ಬಂದ ಬಳಿಕ ಯಾರೂ ಬದಲಾಗದೆ ಪರಸ್ಪರ ನಂಬಿಕೆ ಹಾಗೂ ಸೌಹಾರ್ದತೆಯಿಂದ ಸಂಸ್ಥೆಯನ್ನು ಬೆಳೆಸಬೇಕು ಎಂದು ಸಲಹೆ ನೀಡಿದರು.

''ರೈತರು ತಮ್ಮ ಬೆಳೆಗಳಿಗೆ ತಾವೇ ಬೆಲೆ ನಿಗದಿಪಡಿಸಿಕೊಳ್ಳುವ ಸಾಮರ್ಥ್ಯ ಹೊಂದಬೇಕು ಎಂಬುದೇ ಕಂಪನಿ ಸ್ಥಾಪನೆಯ ಮುಖ್ಯ ಉದ್ದೇಶ. ಇದರಿಂದ ಮಧ್ಯವರ್ತಿಗಳ ಹಾವಳಿ ಕಡಿಮೆಯಾಗುತ್ತದೆ. ರೋಸ್ಟಿಂಗ್ ಸೇರಿದಂತೆ ವಿವಿಧ ಪ್ರಕ್ರಿಯೆಗಳಿಗೆ ಸರ್ಕಾರದ ಸಬ್ಸಿಡಿ ಸಿಗುವ ಅವಕಾಶಗಳಿವೆ. ನಿಮ್ಮ ಸಂಸ್ಥೆಗೆ ನಾನು ಸದಾ ಸಲಹೆಗಾರನಾಗಿ ಇರುತ್ತೇನೆ'' ಎಂದು ಭರವಸೆ

ಮಹಿಳೆಯರು ಆರೋಗ್ಯ ಕುರಿತು ನಿರ್ಲಕ್ಷ್ಯ ವಹಿಸಬೇಡಿ

ಸ್ತ್ರೀ ರೋಗ-ಪ್ರಸೂತಿ ತಜ್ಞರ ಸಂಘದ ಅಧ್ಯಕೆ ಡಾ. ವಿಶಾಲಾಕ್ಷಿ ಸಲಹೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಮಹಿಳೆಯರ ಆರೋಗ್ಯವು ಕುಟುಂಬ ಹಾಗೂ ಸಮಾಜದ ಏಳಿಗೆಯಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಮಹಿಳೆಯರಲ್ಲಿ ಕಂಡುಬರುವ ಅನಾರೋಗ್ಯಕರ ರೋಗ ಲಕ್ಷಣಗಳ ಬಗ್ಗೆ ತಾತ್ಸಾರ ಮಾಡದೇ ತಕ್ಷಣ ತಜ್ಞ ವೈದ್ಯರಿಂದ ಆರೋಗ್ಯ ತಪಾಸಣೆ ಮಾಡಿಸಿಕೊಂಡು ಸೂಕ್ತ ಚಿಕಿತ್ಸೆ ಪಡೆಯುವುದರಿಂದ ಪ್ರಾರಂಭಿಕ ಹಂತದಲ್ಲಿ ರೋಗ ಪತ್ತೆ ಹಚ್ಚಿ ಚಿಕಿತ್ಸೆ ನೀಡಿದರೆ ಸಮಸ್ಯೆಯಿಂದ ಪಾರಾಗಬಹುದು ಎಂದು ಜಿಲ್ಲಾ ಪ್ರಸೂತಿ ಮತ್ತು ಸ್ತ್ರೀ ರೋಗ ತಜ್ಞರ ಸಂಘದ ಅಧ್ಯಕ್ಷೆ ಡಾ. ವಿಶಾಲಾಕ್ಷಿ ಹೇಳಿದರು.

ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಪ್ರಸೂತಿ ಮತ್ತು ಸ್ತ್ರೀ ರೋಗ ತಜ್ಞರ ಸಂಘ, ಶ್ರೀ ಚಾಮರಾಜೇಂದ್ರ ಜಿಲ್ಲಾಸ್ಪತ್ರೆ ಹಾಗೂ ಮಹಿಳೆ ಮತ್ತು ಮಕ್ಕಳ ಆಸ್ಪತ್ರೆ, ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್ ಸಹಭಾಗಿತ್ವದಲ್ಲಿ ಹಿಮ್ಸ್ ಪ್ರಸೂತಿ ಮತ್ತು ಸ್ತ್ರೀ ರೋಗ ಚಿಕಿತ್ಸಾ ವಿಭಾಗದಲ್ಲಿ ಏರ್ಪಡಿಸಿದ್ದ ಗರ್ಭಕೋಶ ಹಾಗೂ ಗರ್ಭಕಂಠದ ಕ್ಯಾನ್ಸರ್ ಪ್ಯಾಲಿಯೇಟಿವ್ ಕೇರ್ ಕಾರ್ಯಕ್ರಮದ ಫಲಾನುಭವಿಗಳ ಕುಟುಂಬದ ಆಯ್ದ 50 ಮಹಿಳೆಯರಿಗಾಗಿ ಏರ್ಪಡಿಸಿದ್ದ ಹೆಚ್ ಪಿವಿ, ಡಿಎನ್‌ಎ ಮತ್ತು ಪ್ಯಾಪ್ ಸ್ಮಿಯರ್ ಪರೀಕ್ಷೆ ಮತ್ತು ಕ್ಯಾನ್ಸರ್ ಅರಿವು ಕಾರ್ಯಕ್ರಮ

ಉದ್ಘಾಟಿಸಿ ಉಪನ್ಯಾಸ ನೀಡಿದರು.

ಮಹಿಳೆಯರು ತಮ್ಮ ಆರೋಗ್ಯದ ಬಗ್ಗೆ ಹೆಚ್ಚು ಕಾಳಜಿ ವಹಿಸಬೇಕು. ಇತ್ತೀಚಿನ ದಿನಗಳಲ್ಲಿ ಕೆಲವು ಮಹಿಳೆಯರಲ್ಲಿ ಗರ್ಭಕೋಶ ಹಾಗೂ ಗರ್ಭಕಂಠದ ಕ್ಯಾನ್ಸರ್ ಹೆಚ್ಚಾಗಿ ಕಾಣಿಸಿಕೊಳ್ಳುತ್ತಿರುವ ಒಂದು ಗಂಭೀರ ಆರೋಗ್ಯ ಸಮಸ್ಯೆಯಾಗಿದೆ. ಹೆಚ್‌ಪಿವಿ, ಡಿಎನ್‌ಎ ಮತ್ತು ಪ್ಯಾಪ್ ಸ್ಮಿಯರ್ ಪರೀಕ್ಷೆ ಮೂಲಕ ಗರ್ಭಕೋಶ ಹಾಗೂ ಗರ್ಭಕಂಠದ ಕ್ಯಾನ್ಸರ್ ಅನ್ನು ಪ್ರಾರಂಭಿಕ ಹಂತದಲ್ಲೇ ಪತ್ತೆಹಚ್ಚಿ ತಡೆಗಟ್ಟಲು ಸಾಧ್ಯವಾಗಿದೆ. ಆದ್ದರಿಂದ ಮಹಿಳೆಯರು ತಮ್ಮ ಆರೋಗ್ಯದ ಬಗ್ಗೆ ಹೆಚ್ಚು ಕಾಳಜಿ ವಹಿಸಿ ಆರೋಗ್ಯವಂತರಾಗಿ ಬದುಕಬೇಕು ಎಂದು ಸಲಹೆ ನೀಡಿದರು.

ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್ ಸಂಸ್ಥೆ ಅಧ್ಯಕ್ಷ ಬಿ.ಡಾ. ಸುಧೀರ್ ಮಾತನಾಡಿ, ಹಿಮ್ಸ್ ಹಾಗೂ ಎಸ್‌ವಿವೈಎಂ ಸಂಸ್ಥೆಯ ಸಹಭಾಗಿತ್ವದಲ್ಲಿ ಕಳೆದ 8 ವರ್ಷಗಳಿಂದ ಮನೆ ಆಧಾರಿತ ಉಪಶಮನ ಆರೈಕೆ ಕಾರ್ಯಕ್ರಮವನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಲಾಗುತ್ತಿದ್ದು, ಇಲ್ಲಿಯವರೆಗೆ ಈ ಕಾರ್ಯಕ್ರಮದ ಅಡಿ ಜಿಲ್ಲೆಯ ಆಯ್ದ ಪ್ರದೇಶಗಳಿಂದ 1975ಕ್ಕೂ ಹೆಚ್ಚು ಕ್ಯಾನ್ಸರ್ ಹಾಗೂ ಇತರೆ ಮಾರಣಾಂತಿಕ ಮತ್ತು ದೀರ್ಘಕಾಲದ ಕಾಯಿಲೆಗಳಿಂದ ಬಳಲುತ್ತಿರುವ ರೋಗಿಗಳಿಗೆ ಉಪಶಮನ ಆರೈಕೆ ನೀಡಲಾಗಿದ್ದು, ಪ್ರಸ್ತುತ 805 ರೋಗಿಗಳು ಉಪಶಮನ ಆರೈಕೆಯ ಸೌಲಭ್ಯ ಪಡೆಯುತ್ತಿದ್ದಾರೆ. ಇಲ್ಲಿಯವರೆಗೆ ಗರ್ಭಕೋಶ ಮತ್ತು ಗರ್ಭಕಂಠದ ಕ್ಯಾನ್ಸರ್ ನಿಂದ ಬಳಲುತ್ತಿರುವ 114 ಮಹಿಳೆಯರಿಗೆ ಉಪಶಮನ ಆರೈಕೆ ನೀಡಲಾಗಿದ್ದು, ಇದರಿಂದ ರೋಗಿಗಳು ನೋವಿಲ್ಲದೇ ಉತ್ತಮ ಗುಣಮಟ್ಟದ ಜೀವನ ನಡೆಸಲು ಸಹಕಾರಿಯಾಗಿದೆ ಎಂದು ಹೇಳಿದರು.

ಜೊತೆಗೆ ರೋಗಿಗಳ ಕುಟುಂಬದವರಿಗೆ ಕ್ಯಾನ್ಸರ್ ಕುರಿತು ಅರಿವು ಮೂಡಿಸಲಾಗುತ್ತಿದ್ದು, ಶಾಲಾ-ಕಾಲೇಜುಗಳು ಹಾಗೂ ಸಾರ್ವಜನಿಕರಲ್ಲಿಯೂ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ, ಪ್ಯಾಲಿಯೇಟಿವ್ ಕೇರ್ ಕಾರ್ಯಕ್ರಮದ ಫಲಾನುಭವಿಗಳ ಕುಟುಂಬದ ಮಹಿಳೆಯರಿಗೆ ಉಚಿತ ಆರೋಗ್ಯ ತಪಾಸಣೆ ಹಾಗೂ ಅರಿವು ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಸಹಕಾರಿಯಾಗುತ್ತಿದೆ ಎಂದು ತಿಳಿಸಿದರು. ಮಹಿಳೆಯರು ಆರೋಗ್ಯ ಸಮಸ್ಯೆಗಳನ್ನು ನಿರ್ಲಕ್ಷ್ಯ ಮಾಡದೆ ನಿಯಮಿತ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳುವುದು ಅತ್ಯಂತ ಅಗತ್ಯ ಎಂದು ಕರೆ ನೀಡಿದರು.

ಜಿಲ್ಲಾ ಪ್ರಸೂತಿ ಮತ್ತು ಸ್ತ್ರೀ ರೋಗ ತಜ್ಞರ ಸಂಘದ ಹಿರಿಯ ತಜ್ಞರಾದ ಡಾ. ಭಾರತಿ ರಾಜಶೇಖರ್, ಡಾ. ಹೆಚ್.ಎಲ್.ಪ್ರೇಮಲತಾ ಮಾತನಾಡಿ, ಮಹಿಳೆಯರಲ್ಲಿ ಅನಿಯಮಿತ ರಕ್ತಸ್ರಾವ, ಬಿಳಿ ಸ್ರಾವ ಹೆಚ್ಚಾಗುವುದು, ಕೆಳ ಹೊಟ್ಟೆ ಅಥವಾ ಬೆನ್ನು ನೋವು, ಇತ್ಯಾದಿ ಲಕ್ಷಣಗಳು ತುಂಬ ದಿನಗಳಿಂದ ಕಂಡು ಬಂದರೆ ಕೂಡಲೇ ತಜ್ಞ ವೈದ್ಯರಿಂದ ತಪಾಸಣೆ ಮತ್ತು ಚಿಕಿತ್ಸೆ ಪಡೆಯಬೇಕು. ಇದರಿಂದ ಮಹಿಳೆಯರಲ್ಲಿ ಕಂಡುಬರುವ ಗರ್ಭಕೋಶ ಹಾಗೂ ಗರ್ಭಕಂಠದ ಕ್ಯಾನ್ಸರ್ ಅನ್ನು ಪ್ರಾರಂಭಿಕ ಹಂತದಲ್ಲಿ ತಡೆಗಟ್ಟಲು ಸಹಕಾರಿಯಾಗುತ್ತದೆ. ಅಲ್ಲದೆ ಮಹಿಳೆಯರು ನಿಯಮಿತ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳುವುದು, ಹೆಚ್‌ಪಿವಿ ಲಸಿಕೆ ಪಡೆಯುವುದು, ವೈಯಕ್ತಿಕ ಸ್ವಚ್ಛತೆ ಕಾಪಾಡಿಕೊಳ್ಳುವುದು, ಯಾವುದೇ ರೋಗ ಲಕ್ಷಣ ಕಂಡುಬಂದರೆ ತಕ್ಷಣ ವೈದ್ಯರನ್ನು ಸಂಪರ್ಕಿಸಿ ಚಿಕಿತ್ಸೆ ಪಡೆಯುವುದರಿಂದ ಮಹಿಳೆಯರು ಆರೋಗ್ಯ ಕಾಪಾಡಿಕೊಳ್ಳಬಹುದು ಎಂದು ಜಾಗೃತಿ ಮೂಡಿಸಿದರು.

ಹಿಮ್ಸ್ ಪ್ರಸೂತಿ ಮತ್ತು ಸ್ತ್ರೀ ರೋಗ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ. ಎಸ್.ಕೆ.ಶ್ರೀಧರ್ ಅಧ್ಯಕ್ಷತೆ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಗರ್ಭಕೋಶ ಹಾಗೂ ಗರ್ಭಕಂಠದ ಕ್ಯಾನ್ಸರ್ ಇತಿಹಾಸ ಹೊಂದಿರುವ ಪ್ಯಾಲಿಯೇಟಿವ್ ಕೇರ್ ಕಾರ್ಯಕ್ರಮದ ಫಲಾನುಭವಿಗಳ ಕುಟುಂಬದ ಆಯ್ದ 50 ಮಹಿಳೆಯರಿಗೆ ಹೆಚ್‌ಪಿವಿ, ಡಿಎನ್‌ಎ ಮತ್ತು ಪ್ಯಾಪ್ ಸ್ಮಿಯರ್ ಪರೀಕ್ಷೆ ಮತ್ತು ಅರಿವು ಮೂಡಿಸಲಾಯಿತು.

ಸ್ತ್ರೀ ರೋಗ ತಜ್ಞರಾದ ಡಾ.ಎ.ಸಾವಿತ್ರಿ, ಕಾರ್ಯದರ್ಶಿಗಳಾದ ಡಾ. ಪೂರ್ಣಿಮ, ಡಾ. ರಘುಪತಿ, ಡಾ. ರಂಜಿತ, ಡಾ. ಅನುಪಮ ಹಾಗೂ ಕ್ಯಾನ್ಸರ್ ವಿಭಾಗದ ಮುಖ್ಯಸ್ಥ ಡಾ. ರಾಘವೇಂದ್ರ ಮತ್ತಿತರರಿದ್ದರು.

ಅಧ್ಯಕ್ಷ ಸ್ಥಾನಕ್ಕೆ ಜೆಡಿಎಸ್ ಬೆಂಬಲಿತ ದುರ್ಗಾಪ್ರಸಾದ್ ಅವಿರೋಧ ಆಯ್ಕೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಬೂವನಹಳ್ಳಿ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಸ್ಥಾನಕ್ಕೆ ಜೆಡಿಎಸ್ ಬೆಂಬಲಿತ ದುರ್ಗಾಪ್ರಸಾದ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಅಧ್ಯಕ್ಷ ಸ್ಥಾನ ತೆರವಾದ ಹಿನ್ನೆಲೆಯಲ್ಲಿ ಸಂಘದ ಕಚೇರಿಯಲ್ಲಿ ಆಯ್ಕೆ ಪ್ರಕ್ರಿಯೆ ನಡೆಯಿತು. ದುರ್ಗಾಪ್ರಸಾದ್ ಏಕೈಕ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಿದ್ದರಿಂದ ಚುನಾವಣಾಧಿಕಾರಿ ಲೀಲಾ ಅವರು ಅವಿರೋಧ ಆಯ್ಕೆ ಘೋಷಿಸಿದರು.

ನೂತನ ಅಧ್ಯಕ್ಷರಾಗಿ ಆಯ್ಕೆಯಾದ ದುರ್ಗಾಪ್ರಸಾದ್ ಅವರನ್ನು ಸಂಘದ ನಿರ್ದೇಶಕರು, ಸದಸ್ಯರು ಹಾಗೂ ಸ್ಥಳೀಯರು ಅಭಿನಂದಿಸಿದರು. ಸಂಘದ ಅಭಿವೃದ್ಧಿ, ರೈತಪರ ಯೋಜನೆಗಳ ಪರಿಣಾಮಕಾರಿ ಅನುಷ್ಠಾನ ಹಾಗೂ ಸದಸ್ಯರ ಹಿತಾಸಕ್ತಿಗೆ ಆದ್ಯತೆ ನೀಡಿ ಕಾರ್ಯನಿರ್ವಹಿಸುವುದಾಗಿ ಅವರು ಈ ಸಂದರ್ಭದಲ್ಲಿ ಭರವಸೆ ವ್ಯಕ್ತಪಡಿಸಿದರು.

ನೂತನ ಅಧ್ಯಕ್ಷ ದುರ್ಗಾಪ್ರಸಾದ್ ಅವರನ್ನು ಸ್ಥಳೀಯ ಶಾಸಕ ಹೆಚ್.ಪಿ.ಸ್ವರೂಪ್ ಹಾಗೂ ಜಿಪಂ ಮಾಜಿ ಅಧ್ಯಕ್ಷ ಸ್ವಾಮಿಗೌಡ ಅಭಿನಂದಿಸಿದರು.

ಈ ವೇಳೆ ತಾಪಂ ಮಾಜಿ ಅಧ್ಯಕ್ಷ ಜಯರಾಂ, ಮಾಜಿ ಅಧ್ಯಕ್ಷ ಬಿ.ಆರ್. ಬೊಮ್ಮೇಗೌಡ, ಕರಿಯಯ್ಯ, ತುಳಸಿರಾಂ, ಉಪಾಧ್ಯಕ್ಷೆ ವಿಜಯಲಕ್ಷ್ಮಿ ಹಾಗೂ ನಿರ್ದೇಶಕರಾದ ಚರಣ್, ರವಿ, ಗಣೇಶ್, ಲಕ್ಷ್ಮಣ್, ಮಂಜುನಾಥ್ ಸೇರಿದಂತೆ ಇತರರು ಹಾಜರಿದ್ದರು.

ಬೂಕ ಗ್ರಾಮಸ್ಥರಿಗೆ ಶೀಘ್ರ ನಿವೇಶನ ಹಕ್ಕುಪತ್ರ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ತಾಲ್ಲೂಕಿನ ಬೂಕ ಗ್ರಾಮದ ಹೊರ ಭಾಗದಲ್ಲಿ ಮನೆ ನಿರ್ಮಿಸಿಕೊಂಡು ವಾಸವಿರುವ ಕುಟುಂಬಗಳಿಗೆ ಹಕ್ಕುಪತ್ರ ಕೊಡಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದೆಂದು ಶಾಸಕ ಸಿ.ಎನ್.ಬಾಲಕೃಷ್ಣ ಭರವಸೆ ನೀಡಿದರು.

ತಾಲ್ಲೂಕಿನ ಹಿರೀಸಾವೆ ಗ್ರಾಮದ ಪದವಿ ಪೂರ್ವ ಕಾಲೇಜಿನಲ್ಲಿ ನಡೆದ ಕಾರ್ಯಕ್ರಮದ ಬಳಿಕ, ಸಂತ್ರಸ್ತರ ಮನವಿ ಸ್ವೀಕರಿಸಿ ಮಾತನಾಡಿದರು. ಬೂಕ ಮತ್ತು ಬೂಕನಬೆಟ್ಟದ ರಸ್ತೆಗೆ ಹೊಂದಿಕೊಂಡಿರುವ ಜಾಗದಲ್ಲಿ ಕೆಲವು ಕುಟುಂಬದವರು ಹಲವು ವರ್ಷಗಳ ಹಿಂದೆ ಮನೆಗಳನ್ನು ನಿರ್ಮಿಸಿದ್ದಾರೆ. ಆದರೆ ನಿಯಮಾನುಸಾರ ನಿವೇಶನ ಮಾಡಿಕೊಂಡಿಲ್ಲ. ಈ ಬಗ್ಗೆ ಗಮನ ಹರಿಸಿ, ಶೀಘ್ರದಲ್ಲಿ ತಹಶೀಲ್ದಾರ್ ಸೇರಿ ಎಲ್ಲಾ ಅಧಿಕಾರಿಗಳನ್ನು ಸ್ಥಳಕ್ಕೆ ಕಳುಹಿಸಿ, ಪರಿಶೀಲಿಸಿ ಮುಂದಿನ ದಿನಗಳಲ್ಲಿ ಕಾನೂನು ರೀತಿ ಹಕ್ಕುಪತ್ರ ನೀಡಲಾಗುವುದೆಂದರು.

ಕಾಫಿ ಮಂಡಳಿ ಬೆಳವಣಿಗೆಗೆ ಎಲ್ಲರ ಸಹಕಾರ ಅಗತ್ಯ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಕಾಫಿ ಮಂಡಳಿಯ ಬೆಳವಣಿಗೆಗೆ ಬೆಳೆಗಾರರು ಹಾಗೂ ಸಂಘಟನೆಗಳು ಕೈ ಜೋಡಿಸಬೇಕೆಂದು ಕಾಫಿ ಮಂಡಳಿ ಅಧ್ಯಕ್ಷ ಎಂ.ಜೆ.ದಿನೇಶ್ ಹೇಳಿದರು.

ನಗರದ ಕಾಫಿ ಮಂಡಳಿ ಕಚೇರಿ ಆವರಣದಲ್ಲಿ ನೂತನವಾಗಿ ನಿರ್ಮಿಸಲಾದ ಕಾಫಿಯಲ್ಲಿ ಪರಿಸರ ಸ್ನೇಹಿ ತಂತ್ರಜ್ಞಾನಗಳ ಉತ್ಕೃಷ್ಟ ಕೇಂದ್ರ ಉದ್ಘಾಟಿಸಿ ಮಾತನಾಡಿದ ಅವರು, ಕಾಫಿ ಮಂಡಳಿಗಳಲ್ಲಿ 28 ವರ್ಷದ ನಂತರ ಸಿಬ್ಬಂದಿ ನೇಮಕವಾಗಿದೆ. ಸಿಬ್ಬಂದಿ ಉತ್ತಮ ರೀತಿಯಲ್ಲಿ ಕೆಲಸ ನಿರ್ವಹಿಸುತ್ತಿದ್ದಾರೆ. ಕಾಫಿ ಮಂಡಳಿ ಏನು ಮಾಡುತ್ತಿದೆ ಎಂಬುದು ಬಹಳಷ್ಟು ಜನರಿಗೆ ಗೊತ್ತಿಲ್ಲ.

ಕಾಫಿ ಮಂಡಳಿ ಸರ್ಕಾರದ ಮಂಡಳಿಯಲ್ಲ ನಮ್ಮ ಮಂಡಳಿ ಎಂಬ ಭಾವನೆ ಜನರಲ್ಲಿ ಮೂಡಬೇಕೆಂದರು.

ರಾಜ್ಯ ಸರ್ಕಾರ ಕಾಫಿ ಬೆಳೆ ಬಗ್ಗೆ ಗಮನಹರಿಸಿ ಉತ್ತೇಜನ ನೀಡಬೇಕು.

ಬೆಂಗಳೂರಿನಲ್ಲಿ ನಮ್ಮದೇಯಾದ ಕೇಂದ್ರ ಹಾಗು ಕ್ಯಾಂಪಸ್ ನಿರ್ಮಾಣವಾಗಬೇಕು. ಕಾಫಿಗೆ ಉತ್ತೇಜನ ದೊರಕಿಸಿಕೊಡುವ ನಿಟ್ಟಿನಲ್ಲಿ ಬೆಂಗಳೂರನ್ನು ಕ್ಯಾಪಿಟಲ್ ಸಿಟಿ ಮಾಡಿಕೊಳ್ಳಬೇಕು. ಈ ಸಲುವಾಗಿ ಸರ್ಕಾರ ಜಾಗ ಒದಗಿಸಿಕೊಡಬೇಕೆಂದರು.

ಕಾಫಿ ಮಂಡಳಿ ಸಿಕ್ಕ ಅವಕಾಶವನ್ನು ಸದುಪಯೋಗಪಡಿಸಿಕೊಂಡು ಮುನ್ನಡೆಯುತ್ತಿದೆ. ಕಾಫಿ ಇಳುವರಿ ಬರಲು ರಾಸಾಯನಿಕ ಅಗತ್ಯ ಎಂದು ಸಂಶೋಧನೆಗಳಿಂದ ದೃಢಪಟ್ಟಿದೆ. ಕಾಫಿ ಬೆಳೆಯಿಂದ 12 ಸಾವಿರ ಕೋಟಿ ರೂ. ರಾಜ್ಯಕ್ಕೆ ಲಭಿಸುತ್ತಿದೆ. ಈ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಬೆಳೆಯನ್ನು ಪ್ರೋತ್ಸಾಹಿಸಬೇಕು ಎಂದರು.

ಕಾಫಿ ಮಂಡಳಿ ಕಾರ್ಯನಿರ್ವಹಣಾಧಿಕಾರಿ ಕುಮಾರ್ ರಾವ್ ಮಾತನಾಡಿ, ಕಾಫಿಯಲ್ಲಿ ಪರಿಸರ ಸ್ನೇಹಿ ತಂತ್ರಜ್ಞಾನಗಳ ಉತ್ಕೃಷ್ಟ ಕೇಂದ್ರ ಉದ್ಘಾಟನೆಯಾಗುತಿರುವುದು ಜಿಲ್ಲೆಗೆ ಹೆಮ್ಮೆಯ ವಿಚಾರ.

ಮುಂದಿನ ದಿನಗಳಲ್ಲಿ ಕೇಂದ್ರ ಮಾದರಿಯಾಗಬೇಕು. ಈ ನಿಟ್ಟಿನಲ್ಲಿ ಮಂಡಳಿ ಹಾಗು ಬೆಳೆಗಾರರು ಗಮನ ಹರಿಸಬೇಕು. ಒಗ್ಗಟ್ಟಿನಿಂದ ಕೆಲಸ ನಿರ್ವಹಿಸಿದರೆ ಯಶಸ್ವಿಯಾಗಲು ಸಾಧ್ಯ ಎಂದರು.

ಕಾಫಿ ಮಂಡಳಿ ಜಂಟಿ ನಿರ್ದೇಶಕ ಸೆಂಟಲ್ ಕುಮಾರ್ ಮಾತನಾಡಿ, ಕಾಫಿ ಗಿಡಗಳಿಗೆ ಔಷಧೋಪಚಾರ ಮಾಡಲು ಕಷ್ಟ ಎನ್ನುವ ಕಾಲಘಟ್ಟದಲ್ಲಿ ಬೆಳೆಗಾರರಿಗೆ ಉಪಯೋಗ ಕಲ್ಪಿಸುವ ನಿಟ್ಟಿನಲ್ಲಿ ಕೇಂದ್ರ ಸ್ಥಾಪಿಸಲಾಗಿದೆ. ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಭಾರತೀಯ ಕಾಫಿಯಲ್ಲಿ ಕೆಮಿಕಲ್ ಅಂಶ ಕಂಡು ಬಂದಿರುವುದಾಗಿ ಹೇಳಿದ್ದಾರೆ. ಈ ಯೋಜನೆಯಿಂದ ಕಡಿಮೆ ಔಷಧೋಪಚಾರ ಹಾಗು ಕಡಿಮೆ ಖರ್ಚು ಬೆಳೆಗಾರರಿಗೆ ತಗುಲಲಿದೆ.

ಪರಿಸರಕ್ಕೆ ಪೂರಕವಾಗಿ ಕಾಫಿ ಉತ್ಪಾದನೆ ಮಾಡುವ ನಿಟ್ಟಿನಲ್ಲಿ ಕೇಂದ್ರ ತೆರಯಲಾಗಿದ್ದು, ಬೆಳೆಗಾರರ ಬೇಡಿಕೆಗೆ ಪೂರಕವಾಗಿ ಕೇಂದ್ರ ಕಾರ್ಯನಿರ್ವಹಿಸಲಿದೆ ಎಂದರು.

ಸಕಲೇಶಪುರ ತಾಲ್ಲೂಕು ಎಸ್‌ಎಲ್‌ಒ ರಂಜಿತ್ ಕುಮಾರ್ ಅವರು, ಕೇಂದ್ರದ ಕಾರ್ಯವೈಖರಿ ಹಾಗೂ ಅದರಿಂದ ಬೆಳೆಗಾರರಿಗೆ ಆಗುವ ಉಪಯೋಗಗಳ ಬಗ್ಗೆ ವಿವರಿಸಿ ಕಾಂಡ ಕೋರಕ, ಕಾಯಿ ಕೋರಕ ನಿಯಂತ್ರಣದ ಕುರಿತು ಹಾಗು ರೆಕ್ಕೆ ಬೋರರ್, ರೋಗ ನಿಯಂತ್ರಣಗಳ ಬಗ್ಗೆ ವಿವರಿಸಿದರು. ಕಾಫಿ ಬೆಳೆಗಾರರ ಸಂಘದ ಪದಾಧಿಕಾರಿಗಳು, ಅಧಿಕಾರಿಗಳು ಇದ್ದರು.

ಅರಕಲಗೂಡಿನಲ್ಲಿ ರೈತ ಸಮಾವೇಶ-ಸೇರ್ಪಡೆ ಕಾರ್ಯಕ್ರಮ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಅರಕಲಗೂಡು: ರಾಷ್ಟ್ರ ಸುಭೀಕ್ಷವಾಗಿರಬೇಕೆಂದರೆ ರೈತರ ಕೊಡುಗೆ ಹೆಚ್ಚಿದ್ದು ಅನ್ನದಾತರನ್ನು ಎಲ್ಲರೂ ಗೌರವಿಸಬೇಕೆಂದು ತಹಸೀಲ್ದಾರ್ ಸೌಮ್ಯ ಹೇಳಿದರು.

ಪಟ್ಟಣದ ಕೃಷಿ ಇಲಾಖೆ ಸಭಾಂಗಣದಲ್ಲಿ ರಾಜ್ಯ ರೈತ ಸಂಘ-ರೈತ ಶಕ್ತಿ ವತಿಯಿಂದ ನಡೆದ ರೈತ ಸಮಾವೇಶ ಹಾಗು ರೈತ ಸೇರ್ಪಡೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ರೈತ ಸಂಘಕ್ಕೆ ಯಾವುದೇ ಜಾತಿ, ಧರ್ಮ, ಪಂಥ ಬೇಧವಿಲ್ಲ. ರಾಜ್ಯದಲ್ಲಿ ರೈತ ಸಂಘಕ್ಕೆ ವಿಶೇಷ ಮನ್ನಣೆ ಇದೆ. ಅನ್ನದಾತರಿಗೆ ನ್ಯಾಯ ಕೊಡಿಸುವಲ್ಲಿ ಹೋರಾಟಗಾರರ ಪರಿಶ್ರಮ ಹೆಚ್ಚಿದೆ. ಸರ್ಕಾರದ ಯೋಜನೆಗಳನ್ನು ರೈತರು ಪಡೆದು ಸ್ವಾವಲಂಬಿ ಬದುಕು ಕಟ್ಟಿಕೊಳ್ಳಬೇಕು. ನಮ್ಮ ಮಿತಿಯೊಳಗೆ ರೈತರಿಗೆ ಸಾಧ್ಯವಾದಷ್ಟು ಸಹಾಯ ಮಾಡಲಾಗುತ್ತಿದೆ ಎಂದರು.

ರಾಜ್ಯ ರೈತ ಸಂಘದ ಉಪಾಧ್ಯಕ್ಷ ವಾಜಿದ್ ಬೇಗ್ ಮಾತನಾಡಿ, ಕಷ್ಟಪಟ್ಟು ಕೆಲಸ ಮಾಡುವ ರೈತರಿಗೆ ಅನ್ಯಾಯವಾದಾಗ ಸಮಾಜದ ಪ್ರತಿಯೊಬ್ಬರು ಹೋರಾಟಕ್ಕೆ ಕೈಜೋಡಿಸಬೇಕು ಎಂದರು. ಸಂಘದ ರಾಜ್ಯಾಧ್ಯಕ್ಷ ದಯಾನಂದ್ ಅವರು ಮಾತನಾಡಿ, ನಮ್ಮ ಸಂಘ ರಾಷ್ಟ್ರಮಟ್ಟದ ವರೆಗೂ ಬೆಳೆಯಬೇಕು. ನಮಗೆ ಕರ್ನಾಟಕ ರಾಜ್ಯ ರೈತ ಸಂಘದ ಒಕ್ಕೂಟದ ಪದಾಧಿಕಾರಿಗಳು ಸಹಾಯ ಮಾಡುತ್ತಿದ್ದು ಅದನ್ನು ಸದುಪಯೋಗಪಡಿಸಿಕೊಳ್ಳಬೇಕು. ಸದಸ್ಯರ ಸಂಖ್ಯೆ ಹೆಚ್ಚಾದರೆ ಹೋರಾಟಕ್ಕೆ ಶಕ್ತಿ ಬರುತ್ತದೆ. ಆ ನಿಟ್ಟಿನಲ್ಲಿ ಪದಾಧಿಕಾರಿಗಳು ಚಿಂತಿಸಬೇಕು ಎಂದರು.

ಸಂಘದ ರಾಜ್ಯ ಕಾರ್ಯದರ್ಶಿ ಸೋಮಶೇಖರ್, ಜಿಲ್ಲಾ ಉಪಾಧ್ಯಕ್ಷ ನವೀನ್ ಗೌಡ, ರಾಜ್ಯ ಮಹಿಳಾ ಘಟಕದ ಅಧ್ಯಕ್ಷೆ ಹೇಮಾ, ಬೀರಪ್ಪ ದೇಸನೂರ್, ಬಸನಗೌಡ ಪಾಟೀಲ್, ತಾಲ್ಲೂಕು ಅಧ್ಯಕ್ಷ ದಿನೇಶ್ ಗೌಡ, ರಾಮೇಗೌಡ, ಕೇಶವಯ್ಯ, ಲೋಕೇಶ್ ಸರಗುರು, ರಾಮನಾಥಪುರ ಹೋಬಳಿ ಘಟಕ ಅಧ್ಯಕ್ಷ ರಘು, ರಜನೀಶ್, ಉಪನ್ಯಾಸಕ ಕೆ.ಶ್ರೀನಿವಾಸ್ ಮತ್ತಿತರರಿದ್ದರು.

ಎಐಡಿಎಸ್‌ಓ ನೇತೃತ್ವದಲ್ಲಿ ಪ್ರತಿರೋಧ ಸಮಾವೇಶ

**ಕನ್ನಡ ಪೋಸ್ಟ್ ನ್ಯೂಸ್ ನೆಟ